# ಹಿಂದಿ ತೆಗೆದ ಕೈ ಸರ್ಕಾರಕ್ಕೆ ಜ್ಞಾನದ ಕೊರತೆ: ಹೊರಟ್ಟಿ

## ಗ್ರೇಡಿಂಗ್ ನೀಡುತ್ತಿರುವುದಕ್ಕೆ ಸಭಾಪತಿ ಸಿಡಿಮಿಡಿ



**• ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ

ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಹಿಂದಿ ವಿಷಯಕ್ಕೆ ಅಂಕ ತೆಗೆದು ಗ್ರೇಡಿಂಗ ನಿರ್ಣಯ ಕೈಗೊಂಡಿರುವ ರಾಜ್ಯ ಸರ್ಕಾರಕ್ಕೆ ಸಾಮಾನ್ಯ ಜ್ಞಾನ ಇಲ್ಲ. ಈ ನೀತಿ ಕೈಬಿಟ್ಟು ಮೊದಲಿನ ಪದ್ಧತಿಯನ್ನೇ ಮುಂದುವರಿಸಬೇಕು ಎಂದು ಸಭಾಪತಿ ಬಸವರಾಜ ಹೊರಟ್ಟಿ ಕಿಡಿಕಾರಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ,ಹಿಂದಿ ಸೇರಿ ತೃತೀಯ ಭಾಷೆಗೆ ಗ್ರೇಡ್ ನೀಡುವ ಶಿಕ್ಷಣ ಇಲಾಖೆಯ ನಿರ್ಧಾರ ಖಂಡನಾರ್ಹ. ಹಿಂದಿ ಅಲ್ಲದೇ ಕೆಲವೆಡೆ ತೃತೀಯ ಭಾಷೆಯಾಗಿ ಕನ್ನಡ, ಸಂಸ್ಕೃತ, ಉರ್ದು, ಇಂಗ್ಲಿಷ್, ಮರಾಠಿ ಭಾಷೆಗಳಿವೆ. ಇದಕ್ಕೂ ಹೊಡೆತ ಬೀಳಲಿದೆ. ಈಗಾಗಲೇ ಶಿಕ್ಷಕರು ಒಂದು ವರ್ಷ ಮಕ್ಕಳಿಗೆ ಹಿಂದಿ ವಿಷಯದಲ್ಲಿ ಪಾಠ ಮಾಡಿದ್ದಾರೆ.ಪರೀಕ್ಷಾ ಸಮಯದಲ್ಲೇ ತಜ್ಞರೊಂದಿಗೆ ಚರ್ಚಿಸದೇ ಈ ನಿರ್ಧಾರ ಸರಿಯಲ್ಲ ಎಂದರು.

**ದ್ವಿಭಾಷಾ ನೀತಿ ಸರಿಯಲ್ಲ:** ಮಕ್ಕಳ ಕಲಿಕೆಯ ವಿಷಯದಲ್ಲಿ ದ್ವಿಭಾಷಾ ನೀತಿ ಸರಿಯಲ್ಲ. ಆಡಳಿತ ಭಾಷೆಮಾಡುವಂತೆ ನಾನು ಒತ್ತಾಯಿಸುವುದಿಲ್ಲ. ಆದರೆ, ಶಾಲಾ-ಕಾಲೇಜುಗಳಲ್ಲಿ ಕಲಿಯುವ ವಿಷಯದಲ್ಲಿ ಬದಲಾವಣೆ ಮಾಡುವುದು ಸರಿಯಲ್ಲ. ಈಗ ಹಿಂದಿ ಭಾಷೆಗೆ ಅಂಕ ತೆಗೆದು ಗ್ರೇಡ್ ನೀಡಿದ್ದಾರೆ. ಮುಂದೆ ಎಲ್ಲ ಭಾಷೆಗಳಿಗೂ ಗ್ರೇಡ್ ಕೇಳುತ್ತಾರೆ. ನೀಡಲು ಆಗುತ್ತದೆಯೇ ಎಂದು ಹೊರಟ್ಟಿ ಪ್ರಶ್ನಿಸಿದರು.

# ಹಿಂದಿಗೆ ಗ್ರೇಡಿಂಗ್ ಕೈಬಿಡಲು ಸಿಎಂ, ಸಚಿವಗೆ ಹೊರಟ್ಟಿ ಪತ್ರ

## ಹಿಂದಿನಂತೆ ಅಂಕ ಪದ್ಧತಿ ಮುಂದುವರಿಸಿ: ಸಭಾಪತಿ

■ **ಉದಯವಾಣಿ ಸಮಾಚಾರ**

**ಹುಬ್ಬಳ್ಳಿ:** ಹಿಂದಿ ವಿಷಯಕ್ಕೆ ಗ್ರೇಡಿಂಗ್ ಕೊಡುವ ಪದ್ಧತಿಯನ್ನು ಕೈ ಬಿಟ್ಟು ಹಿಂದಿನಂತೆ ಅಂಕಗಳನ್ನು ನೀಡುವ ವ್ಯವಸ್ಥೆ ಮುಂದುವರಿಯಬೇಕು. ಹೆಚ್ಚೆಚ್ಚು ಭಾಷೆಗಳನ್ನು ಕಲಿಯುವುದರಿಂದ ಮೆದುಳಿನ ಬೆಳವಣಿಗೆ ಆಗುತ್ತದೆ ಎಂಬುವುದು ಮನೋವಿಜ್ಞಾನ ಪ್ರತಿಪಾದಿಸುತ್ತಿದೆ. ಹೀಗಾಗಿ ಸರ್ಕಾರ ತೆಗೆದುಕೊಂಡಿರುವ ನಿರ್ಧಾರ ಕೈಬಿಡುವಂತೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ.



ಸಿಎಂ ಸಿದ್ದರಾಮಯ್ಯ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಹಾಗೂ ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಪತ್ರ ಬರೆದಿದ್ದು, ರಾಷ್ಟ್ರೀಯ ಏಕತೆಯ ಹಿತದೃಷ್ಟಿಯಿಂದ ಹಾಗೂ ಬಹು ಭಾಷೆಗಳ ಕಲಿಕೆ ಉತ್ತೇಜಿಸುವ ಉದ್ದೇಶದಿಂದ ತ್ರಿಭಾಷಾ ಸೂತ್ರವನ್ನು ದೇಶದಲ್ಲಿ 1961ರಿಂದ ಜಾರಿಗೆ ತರಲಾಗಿದೆ. ಭಾಷೆಗಳ ಕಲಿಕೆಯಿಂದ ವಿದ್ಯಾರ್ಥಿಗಳಿಗೆ ಅನುಕೂಲವೇ ಹೊರತು ಅನಾನುಕೂಲವೇನಿಲ್ಲ ಎಂಬುದು ಭಾಷಾ ತಜ್ಞರ ಅಭಿಪ್ರಾಯವಾಗಿದೆ. ಒಂದು ವೇಳೆ ದ್ವಿಭಾಷಾ ನೀತಿ ಜಾರಿಗೆ ತಂದಿದ್ದೇ ಆದಲ್ಲಿ ಭಾಷೆಯ ಜ್ಞಾನದ ಕೊರತೆಯಿಂದಾಗಿ ಸಂವಹನಕ್ಕೆ ತೊಂದರೆಯಾಗುತ್ತದೆ ಎಂದಿದ್ದಾರೆ.